Akashvani : Bangalore
National Bulletin In Kannada
15.10.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

- **ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭಾ ಚುನಾವಣೆಗಳಿಗೆ ದಿನಾಂಕ ಪ್ರಕಟಿಸಿದ ಕೇಂದ್ರ ಚುನಾವಣಾ ಆಯೋಗ**

- **ಅಂತಾರಾಷ್ಟ್ರೀಯ ದೂರಸಂಪರ್ಕ ಒಕ್ಕೂಟ-ವಿಶ್ವ ದೂರಸಂಪರ್ಕ ಪ್ರಮಾಣೀಕರಣ ಅಧಿವೇಶನ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ**

- **ಭಾರತದಲ್ಲಿ ಉದ್ಯಮ, ಹೂಡಿಕೆಯ ಬೆಳವಣಿಗೆಗೆ ಅಮೆರಿಕ - ಭಾರತ ವ್ಯೂಹಾತ್ಮಕ ಪಾಲುದಾರಿಕೆ ವೇದಿಕೆಯಿಂದ ಉತ್ತೇಜನ- ಸಚಿವೆ ನಿರ್ಮಲಾ ಸೀತಾರಾಮನ್**

- **ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್; ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಪಿ.ವಿ.ಸಿಂಧೂ-ಚೀನಾ ತೈಪೆಯ ಪೈ ಯು ಪೊ ನಡುವೆ ಸೆಣಸಾಟ**

**<><*<><>*><>**

ಮಹಾರಾಷ್ಟ್ರದಲ್ಲಿ ಮುಂದಿನ ತಿಂಗಳು ೨೦ ರಂದು ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ಜಾರ್ಖಂಡ್‌ನಲ್ಲಿ ಈ ವರ್ಷ ನವೆಂಬರ್ ೧೩ ಮತ್ತು ೨೦ ರಂದು ಎರಡು ಹಂತಗಳಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಎರಡು ರಾಜ್ಯಗಳಲ್ಲಿ ನವೆಂಬರ್ ೨೩ ರಂದು ಮತ ಎಣಿಕೆ ನಡೆಯಲಿದೆ. ಮಹಾರಾಷ್ಟ್ರ ಮತ್ತು ಜಾರ್ಖಂಡ್ ವಿಧಾನಸಭಾ ಚುನಾವಣೆಯ ವೇಳಾಪಟ್ಟಿಯನ್ನು ಚುನಾವಣಾ ಆಯೋಗ ಇಂದು ಪ್ರಕಟಿಸಿದೆ. ನವದೆಹಲಿಯಲ್ಲಿ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್, ೨೮೮ ಸದಸ್ಯರ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ಇದೇ ತಿಂಗಳ ೨೨ ರಂದು ಅಧಿಸೂಚನೆಯನ್ನು ಹೊರಡಿಸಲಾಗುವುದು ಮತ್ತು ಅಭ್ಯರ್ಥಿಗಳು ಇದೇ ೨೯ ರವರೆಗೆ ತಮ್ಮ ನಾಮಪತ್ರಗಳನ್ನು ಸಲ್ಲಿಸಬಹುದು. ರಾಜ್ಯದಲ್ಲಿ ೯.೬೩ ಕೋಟಿ ಮತದಾರರಿಗಾಗಿ ಒಂದು ಲಕ್ಷಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು ಎಂದು ತಿಳಿಸಿದರು. ಜಾರ್ಖಂಡ್‌ನಲ್ಲಿ ಈ ತಿಂಗಳ ೧೮ ರಂದು ಮೊದಲ ಹಂತದ ಮತದಾನಕ್ಕೆ ಅಧಿಸೂಚನೆಯನ್ನು ಹೊರಡಿಸಲಾಗುವುದು ಮತ್ತು ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಇದೇ

೨೫ ರವರೆಗೆ ಸಲ್ಲಿಸಬಹುದು. ರಾಜ್ಯದಲ್ಲಿ ಎರಡನೇ ಹಂತದ ಮತದಾನಕ್ಕೆ ಇದೇ ತಿಂಗಳ ೨೨ರಂದು ಅಧಿಸೂಚನೆ ಹೊರಬೀಳಲಿದ್ದು, ಅಕ್ಟೋಬರ್ ೨೯ರವರೆಗೆ ನಾಮಪತ್ರ ಸಲ್ಲಿಸಲು ಅವಕಾಶವಿದೆ ಎಂದು ಅವರು ಮಾಹಿತಿ ನೀಡಿದರು. ಜಾರ್ಖಂಡ್‌ನ ೨೯ ಸಾವಿರಕ್ಕೂ ಹೆಚ್ಚು ಮತಗಟ್ಟೆಗಳಲ್ಲಿ ೨.೬ ಕೋಟಿ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಚುನಾವಣಾ ವೇಳಾಪಟ್ಟಿ ಪ್ರಕಟವಾದ ಹಿನ್ನೆಲೆಯಲ್ಲಿ ಎರಡೂ ರಾಜ್ಯಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ ಎಂದು ಮುಖ್ಯ ಚುನಾವಣಾ ಆಯುಕ್ತರು ತಿಳಿಸಿದರು. ಚುನಾವಣಾ ಆಯೋಗವು ಹಲವಾರು ವಿಧಾನಸಭಾ ಸ್ಥಾನಗಳು ಮತ್ತು ಎರಡು ಲೋಕಸಭಾ ಸ್ಥಾನಗಳಿಗೆ ಉಪಚುನಾವಣೆಯ ವೇಳಾಪಟ್ಟಿಯನ್ನು ಪ್ರಕಟಿಸಿದೆ. ವಿವಿಧ ರಾಜ್ಯಗಳ ೪೭ ವಿಧಾನಸಭಾ ಕ್ಷೇತ್ರಗಳಿಗೆ ಮತ್ತು ಕೇರಳದ ವಯನಾಡ್ ಸಂಸದೀಯ ಸ್ಥಾನಕ್ಕೆ ನವೆಂಬರ್ ೧೩ ರಂದು ಉಪ ಚುನಾವಣೆ ನಡೆಯಲಿದೆ. ಉತ್ತರಾಖಂಡದ ಒಂದು ವಿಧಾನಸಭಾ ಸ್ಥಾನ ಮತ್ತು ಮಹಾರಾಷ್ಟ್ರದ ನಾಂದೇಡ್ ಲೋಕಸಭಾ ಕ್ಷೇತ್ರಕ್ಕೆ ನವೆಂಬರ್ ೨೦ ರಂದು ಉಪಚುನಾವಣೆ ನಡೆಯಲಿದ್ದು, ಮತಗಳ ಎಣಿಕೆ ನವೆಂಬರ್ ೨೩ ರಂದು ನಡೆಯಲಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

<><*<><>*><>

ಇದೇ ವೇಳೆ ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ದಿನಾಂಕ ಘೋಷಣೆಯಾಗಿದೆ. ದೆಹಲಿಯಲ್ಲಿಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಸುದ್ದಿಗೋಷ್ಠಿ ನಡೆಸಿ ಶಿಗ್ಗಾಂವಿ, ಚನ್ನಪಟ್ಟಣ  ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆಗೆ ದಿನಾಂಕ ಪ್ರಕಟಿಸಿದ್ದಾರೆ. ನವೆಂಬರ್ ೧೩ರಂದು ಚನ್ನಪಟ್ಟಣ, ಸಂಡೂರು, ಶಿಗ್ಗಾಂವಿ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ನವೆಂಬರ್ ೨೩ರಂದು ಈ ಮೂರು ಕ್ಷೇತ್ರಗಳ ಮತ ಎಣಿಕೆ ನಡೆಯಲಿದೆ. ಸಂಸದರಾಗಿ ಆಯ್ಕೆಯಾಗಿರುವ ಹೆಚ್.ಡಿ ಕುಮಾರಸ್ವಾಮಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ಚನ್ನಪಟ್ಟಣ ಕ್ಷೇತ್ರ ತೆರವಾಗಿದ್ದರೆ, ಬಸವರಾಜ ಬೊಮ್ಮಾಯಿ ರಾಜೀನಾಮೆಯಿಂದ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರ ತೆರವಾಗಿದೆ. ಇ.ತುಕಾರಾಂ ರಾಜೀನಾಮೆಯಿಂದ ತೆರವಾಗಿರುವ ಸಂಡೂರು ಕ್ಷೇತ್ರಕ್ಕೂ ಉಪಚುನಾವಣೆ ನಡೆಯಲಿದೆ.

<><*<><>*><>

ಮೂರು ಆಫ್ರಿಕಾ ರಾಷ್ಟ್ರಗಳ ಭೇಟಿಯ ಮೊದಲ ಚರಣದಲ್ಲಿ ಅಲ್ಜೀರಿಯಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಮೂರನೇ ದಿನವಾದ ಇಂದು ಸಿದಿ ಅಬ್ದೆಲ್ಲಾ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದಲ್ಲಿ ಗೌರವ ಡಾಕ್ಟರೇಟ್ ಪದವಿ ಸ್ವೀಕರಿಸಿದರು. ಅಲ್ಜೀರಿಯಾ

ಉನ್ನತ ಶಿಕ್ಷಣ ಸಚಿವ ಕಮಲ್ ಬದಾರಿ , ದ್ರೌಪದಿ ಮುರ್ಮು ಅವರಿಗೆ ಪದವಿ ಪ್ರದಾನ ಮಾಡಿದರು. ನಂತರ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ದ್ರೌಪದಿ ಮುರ್ಮು, ಮಾನವ ಅಭಿವೃದ್ಧಿ, ಸಾಮಾಜಿಕ ಉನ್ನತಿ, ಆರ್ಥಿಕ ಅಭಿವೃದ್ಧಿಯಲ್ಲಿ ಶಿಕ್ಷಣ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ ಎಂದರು. ಶಿಕ್ಷಣದಿಂದಾಗಿ ಕೇವಲ ವ್ಯಕ್ತಿಯ ವಿಕಸನ ಮಾತ್ರವಲ್ಲದೆ, ದೇಶದ ಅಭಿವೃದ್ಧಿಯೂ ಸಾಧ್ಯವಾಗಲಿದೆ. ಇತ್ತೀಚಿನ ವರ್ಷಗಳಲ್ಲಿ ಶಿಕ್ಷಣ ವಲಯದಲ್ಲಿ ಭಾರತ ಮಹತ್ವದ ಪ್ರಗತಿ ಸಾಧಿಸಿದೆ. ಇದರಿಂದಾಗಿ ಸಾಕ್ಷರತೆ ಪ್ರಮಾಣ ಗಮನಾರ್ಹವಾಗಿ ಹೆಚ್ಚಳಗೊಂಡಿದೆ. ಜಗತ್ತಿನಲ್ಲಿ ಅತಿ ಹೆಚ್ಚಿನ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ದೇಶಗಳ ಸಾಲಿನಲ್ಲಿ ಭಾರತ ಪ್ರಮುಖ ಸ್ಥಾನ ಗಳಿಸಿದೆ ಎಂದು ರಾಷ್ಟ್ರಪತಿ ಹೇಳಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯ ಭಾರತ್ ಮಂಟಪದಲ್ಲಿ ಅಂತಾರಾಷ್ಟ್ರೀಯ ದೂರಸಂಪರ್ಕ ಒಕ್ಕೂಟ - ವಿಶ್ವ ದೂರಸಂಪರ್ಕ ಪ್ರಮಾಣೀಕರಣ ಅಧಿವೇಶನ- ಡಬ್ಲ್ಯೂಟಿಎಸ್ಎ-೨೦೨೪ ಅನ್ನು ಉದ್ಘಾಟಿಸಿದರು. ಇದೇ ವೇಳೆ ಪ್ರಧಾನಿ, ಇಂಡಿಯಾ ಮೊಬೈಲ್ ಕಾಂಗ್ರೆಸ್ ೨೦೨೪ರ ೮ನೇ ಆವೃತ್ತಿಯನ್ನು ಸಹ ಉದ್ಘಾಟಿಸಿದರು. ಡಬ್ಲ್ಯೂಟಿಎಸ್ಎ ಎಂಬುದು ವಿಶ್ವಸಂಸ್ಥೆಯ ಏಜೆನ್ಸಿಯಾದ ಅಂತಾರಾಷ್ಟ್ರೀಯ ದೂರಸಂಪರ್ಕ ಒಕ್ಕೂಟದ ಪ್ರಮಾಣೀಕರಣ ಕಾರ್ಯಕ್ಕಾಗಿ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಆಯೋಜಿಸಲಾದ ಆಡಳಿತ ಸಮ್ಮೇಳನವಾಗಿದೆ. ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಇಂದು ಭಾರತ ಟೆಲಿಕಾಮ್ ಹಾಗೂ ಸಂಬಂಧಿತ ಕ್ಷೇತ್ರಗಳಲ್ಲಿ ಅತಿ ಹೆಚ್ಚು ಅಭಿವೃದ್ಧಿ ಹಾಗೂ ಚಟುವಟಿಕೆಗಳಾಗುತ್ತಿರುವ ದೇಶಗಳಲ್ಲಿ ಒಂದಾಗಿದೆ. ಭಾರತದಲ್ಲಿ ಸುಮಾರು ೧೨೦ ಕೋಟಿ ಮೊಬೈಲ್ ಬಳಕೆದಾರರು, ಸುಮಾರು ೯೫ ಕೋಟಿ ಅಂತಾರ್ಜಾಲ ಬಳಕೆದಾರರಿದ್ದು, ವಿಶ್ವದ ೪೦ ಪ್ರತಿಶತ ನೈಜ ಸಮಯದ ಡಿಜಿಟಲ್ ವ್ಯವಹಾರಗಳು ಭಾರತದಲ್ಲೇ ನಡೆಯುತ್ತಿವೆ ಎಂದರು. ಅಗ್ಗದ ಸಾಧನೆಗಳು, ಅಭಿವೃದ್ಧಿತ ಸಂಪರ್ಕ, ಕೈಗೆಟಕುವ ದತ್ತಾಂಶ ಹಾಗೂ ಡಿಜಿಟಲ್-ಮೊದಲು ನೀತಿ, ಭಾರತದ ಡಿಜಿಟಲ್ ವ್ಯವಸ್ಥೆಯ ದೃಷ್ಟಿಕೋನದ ಆಧಾರ ಸ್ತಂಭಗಳಾಗಿವೆ. ಡಬ್ಲ್ಯೂಟಿಎಸ್ಎ ಜಾಗತಿಕ ಗುಣಮಟ್ಟದೆಡೆಗೆ ಕೆಲಸ ಮಾಡುವ ಉದ್ದೇಶ ಹೊಂದಿದ್ದರೆ, ಇಂಡಿಯಾ ಮೊಬೈಲ್ ಕಾಂಗ್ರೆಸ್ ಡಿಜಿಟಲ್ ಸೇವೆಗಳಲ್ಲಿ ಮಹತ್ತರ ಪಾತ್ರವಹಿಸುತ್ತದೆ ಎಂದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

ಈ ಸಮ್ಮೇಳನ ಭಾರತ ಮತ್ತು ಏಷ್ಯಾ-ಪೆಸಿಫಿಕ್‌ನಲ್ಲಿ ಮೊದಲ ಬಾರಿಗೆ ಆಯೋಜಿಸಲಾಗುತ್ತಿದ್ದು, ಟೆಲಿಕಾಂ, ಡಿಜಿಟಲ್ ಮತ್ತು ಐಸಿಟಿ ಕ್ಷೇತ್ರಗಳನ್ನು ಪ್ರತಿನಿಧಿಸುವ ೧೯೦ ಕ್ಕೂ ಹೆಚ್ಚು ದೇಶಗಳ ಮೂರು ಸಾವಿರಕ್ಕೂ ಹೆಚ್ಚು ಉದ್ಯಮ ನಾಯಕರು, ನೀತಿ-ನಿರೂಪಕರು ಮತ್ತು ತಂತ್ರಜ್ಞಾನ ತಜ್ಞರನ್ನು ಒಟ್ಟುಗೂಡಿಸುವ ಪ್ರಮುಖ ಜಾಗತಿಕ ವೇದಿಕೆಯಾಗಿದೆ. ಈ ಸಮ್ಮೇಳನ ೬-ಜಿ, ಕೃತಕ ಬುದ್ಧಿಮತ್ತೆ, ಬಿಗ್ ಡೇಟಾ, ಸೈಬರ್ ಸೆಕ್ಯುರಿಟಿ ಮುಂತಾದ ಮುಂದಿನ-ಪೀಳಿಗೆಯ ನಿರ್ಣಾಯಕ ತಂತ್ರಜ್ಞಾನಗಳ ಭವಿಷ್ಯವನ್ನು ಚರ್ಚಿಸಲು ದೇಶಗಳಿಗೆ ವೇದಿಕೆಯನ್ನು ಒದಗಿಸುತ್ತದೆ. ಇಂಡಿಯಾ ಮೊಬೈಲ್ ಕಾಂಗ್ರೆಸ್ ೨೦೨೪ ನಲ್ಲಿ ಪ್ರಮುಖ ಟೆಲಿಕಾಂ ಕಂಪನಿಗಳು ಮತ್ತು ನವೋದ್ಯಮಿಗಳು ಕ್ವಾಂಟಮ್ ತಂತ್ರಜ್ಞಾನ ಮತ್ತು ಆರ್ಥಿಕತೆಯ ಪ್ರಗತಿಯನ್ನು ಎತ್ತಿ ತೋರಿಸುವ ಜೊತೆಗೆ ೬ಜಿ, ೫ಜಿ ಬಳಕೆ, ಕ್ಲೌಡ್ ಮತ್ತು ಎಡ್ಜ್ ಕಂಪ್ಯೂಟಿಂಗ್, ಸೆಮಿಕಂಡಕ್ಟರ್‌ಗಳು, ಸೈಬರ್ ಟೆಕ್ ಭದ್ರತೆ, ಹಸಿರು ತಂತ್ರಜ್ಞಾನ, ಸ್ಯಾಟ್ಕಾಮ್ ಮತ್ತು ಎಲೆಕ್ಟ್ರಾನಿಕ್ಸ್ ತಯಾರಿಕೆ ಕ್ಷೇತ್ರದಲ್ಲಿ ಸಾಧಿಸಿರುವ ಪ್ರಗತಿಯ ಮೇಲೆ ಬೆಳಕು ಚೆಲ್ಲಲಿದ್ದಾರೆ.

<><*<><>*><>

ಅಮೆರಿಕ - ಭಾರತ ವ್ಯೂಹಾತ್ಮಕ ಪಾಲುದಾರಿಕೆ ವೇದಿಕೆ- ಯುಎಸ್‌ಐಎಸ್‌ಪಿಎಫ್ ಭಾರತದಲ್ಲಿ ಉದ್ಯಮ ಮತ್ತು ಹೂಡಿಕೆಯ ಬೆಳವಣಿಗೆಗೆ ಉತ್ತೇಜನ ನೀಡಲಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಅಮೆರಿಕ - ಭಾರತ ವ್ಯೂಹಾತ್ಮಕ ಪಾಲುದಾರಿಕೆ ವೇದಿಕೆ ಸದಸ್ಯರೊಂದಿಗೆ ನಡೆದ ಸಂವಾದಲ್ಲಿ ಮಾತನಾಡಿದ ಅವರು, ಭಾರತದ ಕ್ಷಿಪ್ರ ಆರ್ಥಿಕ ಬೆಳವಣಿಗೆ, ಯುವಕರ ಪ್ರಮುಖ ಪಾತ್ರ, ವಿಮೆ, ವಸತಿ, ನವೀಕರಿಸಬಹುದಾದ ಇಂಧನ ಕ್ಷೇತ್ರಗಳ ಕುರಿತು ವಿವರಿಸಿದರು. ವ್ಯಾಪಾರ ಮಾಡಲು ಭಾರತವನ್ನು ಅನುಕೂಲಕರ ತಾಣವನ್ನಾಗಿ ಮಾಡುವ ಕೇಂದ್ರ ಸರ್ಕಾರದ ಬದ್ಧತೆಯನ್ನು ಸಚಿವೆ ನಿರ್ಮಲಾ ಸೀತಾರಾಮನ್ ಪುನರುಚ್ಚರಿಸಿದರು.

<><*<><>*><>

ಭಾರತೀಯ ಸಮುದಾಯವು ವೈವಿಧ್ಯತೆ ಮತ್ತು ಒಳಗೊಳ್ಳುವಿಕೆಯ ಮೌಲ್ಯಗಳಿಂದ ಕೂಡಿದೆ ಎಂದು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಶ್ಲಾಘಿಸಿದ್ದಾರೆ. ಓಂ ಬಿರ್ಲಾ ಅವರು ಜಿನೀವಾದಲ್ಲಿ ೧೪೯ ನೇ ಅಂತರ್ ಸಂಸತ್ ಒಕ್ಕೂಟದ ಭಾರತೀಯ ಸಂಸದೀಯ ನಿಯೋಗದ ನೇತೃತ್ವ ವಹಿಸಿದ್ದಾರೆ. ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತೀಯ ಸಮುದಾಯದ ಕೌಶಲ್ಯ, ಪ್ರತಿಭೆ ಮತ್ತು ಬದ್ಧತೆಯನ್ನು ಶ್ಲಾಘಿಸಿದರು. ಇದೇ ವೇಳೆ ಜಾಗತಿಕ

ಸವಾಲುಗಳನ್ನು ಎದುರಿಸುವಲ್ಲಿ ಭಾರತದ ನಾಯಕತ್ವವನ್ನು ಅವರು ಪ್ರತಿಪಾದಿಸಿದರು. ಭಾರತ ಮತ್ತು ಸ್ವಿಟ್ಜರ್ಲೆಂಡ್ ನಡುವಿನ ಸಹಕಾರದ ಐತಿಹಾಸಿಕ ನಿದರ್ಶನಗಳನ್ನು ಓಂ ಬಿರ್ಲಾ ಸ್ಮರಿಸಿದರು. ವ್ಯಾಪಾರ, ಹೂಡಿಕೆ, ತಂತ್ರಜ್ಞಾನ, ಶಿಕ್ಷಣ ಮತ್ತು ಪರಿಸರ ಸೇರಿದಂತೆ ಕ್ಷೇತ್ರಗಳಲ್ಲಿ ಉಭಯ ದೇಶಗಳ ಸಹಯೋಗವು ಪ್ರವರ್ಧಮಾನಕ್ಕೆ ಬಂದಿದೆ ಎಂದು ಅವರು ಹೇಳಿದರು. ವ್ಯಾಪಾರ ಮತ್ತು ಆರ್ಥಿಕ ಪಾಲುದಾರಿಕೆ ಒಪ್ಪಂದಕ್ಕೆ ಉಭಯ ದೇಶಗಳು ಸಹಿ ಹಾಕುವ ಮೂಲಕ ಪರಸ್ಪರ ಆರ್ಥಿಕ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿಗೆ ಮಹತ್ವದ ಹೆಜ್ಜೆಯಾಗಿದೆ ಎಂದು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅಭಿಪ್ರಾಯಪಟ್ಟರು.

<><*<><>*><>

ಡೆನ್ಮಾರ್ಕ್ ಓಪನ್ ೨೦೨೪ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು ಇಂದು ಒಡೆನ್ಸೆಯ ಅರೆನಾ ಫಿನ್‌ನಲ್ಲಿ ಮಹಿಳೆಯರ ಸಿಂಗಲ್ಸ್ ಸ್ಪರ್ಧೆಯ ಆರಂಭಿಕ ಸುತ್ತಿನಲ್ಲಿ ಚೀನಾ ತೈಪೆಯ ಪೈ ಯು ಪೊ ವಿರುದ್ಧ ಸೆಣಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೭.೪೫ ಕ್ಕೆ ಆರಂಭವಾಗಲಿದೆ. ವಿಶ್ವದ ೧೭ನೇ ಶ್ರೇಯಾಂಕದ ಚೀನಾದ ಲು ಗುವಾಂಗ್ ಜು ವಿರುದ್ಧ ೨೧-೧೨, ೧೯-೨೧, ೧೪-೨೧ ಸೆಟ್‌ಗಳಿಂದ ೧೯ನೇ ಶ್ರೇಯಾಂಕದ ಲಕ್ಷ್ಯ ಸೇನ್ ಪರಾಭವಗೊಂಡಿದ್ದಾರೆ. ಮಹಿಳೆಯರ ಡಬಲ್ಸ್‌ನಲ್ಲಿ ಪಾಂಡಾ ಸಹೋದರಿಯರಾದ ರುತಪರ್ಣ ಮತ್ತು ಶ್ವೇತಪರ್ಣ ಅವರು ಚೈನೀಸ್ ತೈಪೆ ಜೋಡಿಯ ಚಾಂಗ್ ಚಿಂಗ್ ಹುಯಿ ಮತ್ತು ಯಾಂಗ್ ಚಿಂಗ್ ತುನ್ ವಿರುದ್ಧ ೧೮-೨೧, ೨೨-೨೪ ಸೆಟ್‌ಗಳಿಂದ ಸೋತಿದ್ದಾರೆ. ಮಿಶ್ರ ಡಬಲ್ಸ್‌ನಲ್ಲಿ ಸತೀಶ್ ಕುಮಾರ್ ಕರುಣಾಕರನ್ ಮತ್ತು ಆದ್ಯ ವರಿಯಾತ್ ಇಂದು ಸಂಜೆ ಇಂಡೋನೇಷ್ಯಾದ ರೆಹಾನ್ ನೌಫಲ್ ಕುಶರ್ಜಂಟೊ ಮತ್ತು ಲಿಸಾ ಅಯು ಕುಸುಮಾವತಿ ವಿರುದ್ಧ ಸೆಣಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೨೫ ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>**